ಇ) ಪ್ರಯಾಣಿಕರು ಹಿತದೃಷ್ಟಿಯಿಂದ ಕೂಡಲೇ ಅಪಘಾತ ತುರ್ತು ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಿಕೊಡುವುದು ಯಾವಾಗ?

ಡಾ॥ ಎ. ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಯೋಜನೆ ಹಾಗೂ ಕೆ ಎಫ್ ಡಬ್ಲ್ಯೂ ಯೋಜನೆಗಳ ಅಡಿ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ಸಂಭವಿಸುವ ಅಪಘಾತದ ಗಾಯಾಳುಗಳಿಗೆ ತುರ್ತು ಚಿಕಿತ್ಸೆ ನೀಡುವ ಉದ್ದೇಶದಿಂದ ಪ್ರತಿ 50 ಕಿ.ಮೀ. ಅಂತರದಲ್ಲಿ ಒಂದೊಂದು ಟ್ರಾಮಾ ಕೇಂದ್ರ (ತುರ್ತು ಚಿಕಿತ್ಸಾ ಕೇಂದ್ರ) ಸ್ಥಾಪಿಸಲು ಕ್ರಮಕೈಗೊಳ್ಳಲಾಗಿದೆ. ಅದರಂತೆ ನೆಲಮಂಗಲ ತಾಲ್ಲೂಕು ಆ ಸ್ಪತ್ರೆ ಹಾಗೂ ತುಮಕೂರು ಜಿಲ್ಲಾ ಆಸ್ಪತ್ರೆಯಲ್ಲಿ ಸುಸಜ್ಜಿತವಾದ ತುರ್ತು ಚಿಕಿತ್ಸಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ದಾಬಸ್‌ಪೇಟೆಯು ನೆಲಮಂಗಲದಿಂದ ಸುಮಾರು 20 ಕಿಮೀ ಅಂತರದಲ್ಲಿ ಮಾತ್ರ ಇದ್ದು ಅಪಘಾತದ ಗಾಯಾಳುಗಳು ನೆಲಮಂಗಲ ತಾಲ್ಲೂಕು ಆಸ್ಪತ್ರೆಯಲ್ಲಿರುವ ತುರ್ತು ಚಿಕಿತ್ಸಾ ಕೇಂದ್ರದ ಸೌಲಭ್ಯಗಳನ್ನು ಪಡೆಯಬಹುದಾಗಿದೆ.

ಶಾಶ್ವತ ಅನುದಾನಿತ ವಿದ್ಯಾ ಸಂಸ್ಥೆಗಳಿಗೆ ಅನುದಾನ ನೀಡುವುದು

692 (824) ಶ್ರೀ ಚೆನ್ನಿಗಪ್ಪ, ಸಿ. (ಕೊರಟಗೆರೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿರುವ ಶಾಶ್ವತ ಅನುದಾನಿತ ವಿದ್ಯಾ ಸಂಸ್ಥೆಗಳು ಎಷ್ಟು?

ಆ) ಈ ಸಂಸ್ಥೆಗಳಿಗೆ ಸರ್ಕಾರದಿಂದ ಅನುದಾನ ಮಂಜೂರು ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ

ಇ) ಈ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಮತ್ತು ಇತರೆ ಸಿಬ್ಬಂದಿಯವರ ವಯೋಮಿತಿಯು ಮೀರುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

ಈ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನಲ್ಲಿ ಶಾಶ್ವತ ಅನುದಾನಿತ ವಿದ್ಯಾ ಸಂಸ್ಥೆಗಳು ಎಷ್ಟು? ವಿವರ ಒದಗಿಸುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅ) ಶಾಶ್ವತ ಅನುದಾನಿತ ವಿದ್ಯಾ ಸಂಸ್ಥೆಗಳು ಎಂಬ ವರ್ಗದ ವಿದ್ಯಾ ಸಂಸ್ಥೆಗಳು ಇರುವುದಿಲ್ಲ.

ಆ) ಮೇಲಿನ ಪ್ರಶ್ನೆಯಿಂದ ಉದ್ಭವಿಸುವುದಿಲ್ಲ

ಇ) ಮೇಲಿನ ಪ್ರಶ್ನೆಯಿಂದ ಉದ್ಭವಿಸುವುದಿಲ್ಲ

ಈ) ಮೇಲಿನ ಪ್ರಶ್ನೆಯಿಂದ ಉದ್ಭವಿಸುವುದಿಲ್ಲ.